All India Radio: Bangalore
Regional Bulletin In Kannada
06.04.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದಲ್ಲಿ ೧೦೦ ಹೊಸ ವಿದ್ಯುತ್ ಉಪ ಕೇಂದ್ರ ಸ್ಥಾಪಿಸಲು ನಿರ್ಧಾರ - ಇಂಧನ ಸಚಿವ ಕೆ.ಜೆ.ಜಾರ್ಜ್ ಸ್ಪಷ್ಟನೆ
- ವಿಧಾನಸೌಧಕ್ಕೆ ಇನ್ನು ಮುಂದೆ ಶಾಶ್ವತ ವಿದ್ಯುತ್ ದೀಪಾಲಂಕಾರ -ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಲೋಕಾರ್ಪಣೆ
- ಮೀನುಗಾರಿಕೆಗೆ ಏಕರೂಪದ ನೀತಿ ಜಾರಿಗೆ ತರುವಂತೆ ಕರಾವಳಿ ಮೀನುಗಾರರ ಆಗ್ರಹ
- ನಾಡಿನೆಲ್ಲೆಡೆ ಶ್ರೀರಾಮನವಮಿ ಸಂಭ್ರಮ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರಿಂದ ಶುಭಾಶಯ
- ರಾಜ್ಯದ ಹಲವೆಡೆ ಇಂದು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ

****************

ರಾಜ್ಯದಲ್ಲಿ ೧೦೦ ಹೊಸ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ತಿಳಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ಪಟ್ಟಣದಲ್ಲಿ ಸರ್ಕಾರದ ನಡೆ ಕಾರ್ಯಕರ್ತರ ಕಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರಸಕ್ತ ವರ್ಷ ೭೫ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ೧೦೦ ಉಪ ಕೇಂದ್ರಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ ಈಗ ವಿದ್ಯುತ್ ಬೇಡಿಕೆ ಹೆಚ್ಚಿದ್ದು, ಕೃಷಿಗೆ ೧೮ ರಿಂದ ೧೯ ಸಾವಿರ ಮೆಗಾ ವ್ಯಾಟ್ ವಿದ್ಯುತ್ ಅಗತ್ಯವಿದೆ. ರಾಜ್ಯದ ಹಲವೆಡೆ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಿ ಅದಕ್ಕೆ ಸೋಲಾರ್ ಅಳವಡಿಸುವುದರಿಂದ ಭವಿಷ್ಯದಲ್ಲಿ ವಿದ್ಯುತ್ ಕೊರತೆಯ ಸಮಸ್ಯೆ ಬಗೆಹರಿಸಬಹುದು ಎಂದು ಅವರು ತಿಳಿಸಿದ್ದಾರೆ.

***************

ಜನಾಕರ್ಷಣೆ ಮಾಡುವ ಉದ್ದೇಶದಿಂದ ವಿಧಾನಸೌಧಕ್ಕೆ ಶಾಶ್ವತ ವರ್ಣರಂಜಿತ ದೀಪಾಲಂಕಾರ ಮಾಡಲು ಕರ್ನಾಟಕ ಸರ್ಕಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ನಿರ್ಧರಿಸಿದೆ. ಇಂದು ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ದೀಪಾಲಂಕಾರವನ್ನು ಉದ್ಘಾಟಿಸಲಿದ್ದಾರೆ. ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಹಾಗೂ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

ಇಂದು ಸಾರ್ವಜನಿಕರಿಗೂ ವಿಧಾನಸೌಧದ ಆವರಣದಲ್ಲಿ ಮುಕ್ತ ಅವಕಾಶವಿದೆ. ಪ್ರತಿ ಭಾನುವಾರ ಪೊಲೀಸ್ ಬ್ಯಾಂಡ್ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲು ಸರ್ಕಾರ ನಿರ್ಧರಿಸಿದೆ.

***************

ಕರಾವಳಿಯಲ್ಲಿ ಮಳೆಗಾಲದಲ್ಲಿ ಎರಡು ತಿಂಗಳ ಬದಲಾಗಿ ಮೂರು ತಿಂಗಳು ಮೀನುಗಾರಿಕೆಗೆ ನಿಷೇಧ ಹೇರಬೇಕೆಂಬ ಬೇಡಿಕೆ ವ್ಯಕ್ತವಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಸಭೆಯಲ್ಲಿ ಈ ವಿಚಾರದ ಕುರಿತಂತೆ ಚರ್ಚಿಸಲಾಗಿದೆ.

ಸಭೆಯಲ್ಲಿ ಮೀನುಗಾರಿಕಾ ಇಲಾಖೆಯ ಜಂಟಿ ನಿರ್ದೇಶಕ ಸಿದ್ಧಯ್ಯ ಮಾತನಾಡಿ, ಕಳೆದ ವರ್ಷ ಕಡಲ ಮೀನುಗಾರಿಕೆಯಲ್ಲಿ ೨.೩೯ ಲಕ್ಷ ಟನ್ ಮೀನು ಸಂಗ್ರಹವಾಗಿದ್ದರೆ, ಈ ವರ್ಷದ ಸಂಗ್ರಹ

೧.೭೨ ಲಕ್ಷ ಟನ್ ಆಗಿದೆ. ಈ ಬಾರಿಯ ಬಿಸಿಗಾಳಿ ಸಮುದ್ರದ ಮೀನು ಸಂಗ್ರಹದಲ್ಲಿ ಇಳಿಕೆಗೆ ಕಾರಣವಾಗಿದೆ.

ಕೆಲವೆಡೆ ಅಕ್ರಮ ಮೀನುಗಾರಿಕೆ, ಲೈಟ್ ಫಿಶಿಂಗ್ ಬಗ್ಗೆಯೂ ಮೀನುಗಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಮಳೆಗಾಲದ ಮೀನುಗಾರಿಕಾ ನಿಷೇಧದ ಅವಧಿಯನ್ನು ೨ ತಿಂಗಳಿಂದ ೩ ತಿಂಗಳಿಗೆ ವಿಸ್ತರಿಸಬೇಕೆಂಬ ಬೇಡಿಕೆಯೂ ಇದೆ. ರಾಜ್ಯದ ಕರಾವಳಿಯಲ್ಲಿ ಮೂರು ತಿಂಗಳು ನಿಷೇಧ ಮಾಡಿದರೂ ಇತರ ಕರಾವಳಿ ತೀರದ ರಾಜ್ಯಗಳ ಮೀನುಗಾರರು ಆ ಸಮಯದಲ್ಲಿ ಮೀನುಗಾರಿಕೆ ನಡೆಸುತ್ತಾರೆ. ಹೀಗಾಗಿ ಮೀನುಗಾರಿಕೆ ಏಕರೂಪದ ನೀತಿ ಜಾರಿಯಾಗಬೇಕೆಂದು ಮೀನುಗಾರರು ಆಗ್ರಹಿಸಿದ್ದು, ಈ ಕುರಿತಂತೆ ಮೀನುಗಾರಿಕಾ ಇಲಾಖೆ, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಗಮನಕ್ಕೆ ತಂದಿದ್ದಾರೆ.

***************

ಮಂಗಳೂರಿನ ಕೊಡಿಯಾಲ್ ಬೈಲ್ ನಲ್ಲಿರುವ ಜಿಲ್ಲಾ ಕೇಂದ್ರ ಕಾರಾಗ್ರಹದಲ್ಲಿ ಮೊಬೈಲ್ ಜಾಮರ್ ಅಳವಡಿಸಲಾಗಿದ್ದು, ಇದರಿಂದ ಸುತ್ತ ಮುತ್ತಲಿನ ನಿವಾಸಿಗಳು ಸಂಕಷ್ಟ ಅನುಭವಿಸುವಂತಾಗಿದೆ.

ಮೊಬೈಲ್ ನೆಟ್ ವರ್ಕ್ ಸಿಗದೆ ಜನತೆ ಹೈರಾಣಾಗಿದ್ದು, ಆದಷ್ಟು ಬೇಗ ಸಮಸ್ಯೆ ಸರಿಪಡಿಸುವಂತೆ ಮನವಿ ಮಾಡಿದ್ದಾರೆ.

ಜಾಮರ್ ಅಳವಡಿಸಿರುವ ಬಗ್ಗೆ ಪ್ರತಿಕ್ರಿಯಿಸಿರುವ ಶಾಸಕ ಡಿ. ವೇದವ್ಯಾಸ ಕಾಮತ್, ಸಮಸ್ಯೆಯ ಕುರಿತಂತೆ ಈಗಾಗಲೇ ಜೈಲು ಅಧಿಕಾರಿಗಳು, ಪೊಲೀಸ್ ಆಯುಕ್ತರು ಹಾಗೂ ಗೃಹ ಸಚಿವರ ಗಮನಕ್ಕೆ ತರಲಾಗಿದೆ. ಆದರೆ ಸಮಸ್ಯೆ ಬಗೆ ಹರಿದಿಲ್ಲ ಎಂದು ತಿಳಿಸಿದ್ದಾರೆ.

***************

ಭಾರತ-ಅಮೆರಿಕ ಮಿಲಿಟರಿ ಸಹಕಾರದ ಗಮನಾರ್ಹ ಪ್ರದರ್ಶನವಾಗಿ, ಉಭಯ ರಾಷ್ಟ್ರಗಳ ಸೇನಾಪಡೆಗಳು ವಿಶಾಖಪಟ್ಟಣಂ ದುವ್ವಾಡ ಫೈರಿಂಗ್ ರೇಂಜ್‌ನಲ್ಲಿ ಜಂಟಿ ತರಬೇತಿ ಸಮಾರಾಭ್ಯಾಸ ನಡೆಸಿವೆ.

ಉಭಯ ದೇಶಗಳು ಇದನ್ನು 'ಟೈಗರ್ ಟ್ರಯಂಫ್-೨೦೨೫ ಸಮಾರಾಭ್ಯಾಸದ ಭಾಗವಾಗಿ ನಡೆಸಿವೆ. ಉಭಯ ದೇಶಗಳ ಮಿಲಿಟರಿ ಸಾಮರ್ಥ್ಯ, ಯುದ್ಧ ಮತ್ತು ಮಾನವೀಯ ನೆರವು ಸನ್ನಿವೇಶಗಳಲ್ಲಿ ಪರಸ್ಪರ ಕಾರ್ಯಸಾಧ್ಯತೆ, ಯುದ್ಧತಂತ್ರದ ಸಮನ್ವಯ ಮತ್ತು ಕಾರ್ಯಾಚರಣೆಯ ಸನ್ನದ್ಧತೆಯನ್ನು ಹೆಚ್ಚಿಸುವಲ್ಲಿ ಇದು ಸಹಕಾರಿಯಾಗಲಿವೆ.

****************

ನಾಡಿನೆಲ್ಲೆಡೆ ಶ್ರೀ ರಾಮನವಮಿ ಸಂಭ್ರಮ ಮನೆ ಮಾಡಿದೆ. ಶ್ರೀ ರಾಮ ಹಾಗೂ ಹನುಮನ ದೇವಾಲಯಗಳಲ್ಲಿ ವಿಶೇಷ ಪೂಜೆ ನಡೆಯುತ್ತಿದೆ.

ರಾಜ್ಯದ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಮನವಮಿಯ ಶುಭಾಶಯ ಕೋರಿದ್ದಾರೆ. ಪ್ರಭು ಶ್ರೀರಾಮಚಂದ್ರನ ವಚನ ಪಾಲನೆ, ಪ್ರಜಾಸೇವೆಯ ಬದ್ಧತೆ, ನ್ಯಾಯ ನಿಷ್ಠುರತೆ, ಪ್ರೀತಿ - ಮಮತೆ ಮುಂತಾದ ಮಾನವೀಯ ಮೌಲ್ಯಗಳು ನಮ್ಮೆಲ್ಲರ ಆದರ್ಶವಾಗಲಿ ಎಂದು ತಿಳಿಸಿದ್ದಾರೆ. ದ್ವೇಷ ಅಳಿದು ಪ್ರೀತಿಯ ಬೆಳಕು ಎಲ್ಲೆಡೆ ಬೆಳಗಲಿ ಎಂದು ಹಾರೈಸುತ್ತೇನೆ ಎಂದು ಹೇಳಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಜಾಲತಾಣದಲ್ಲಿ ಸತ್ಯ, ತ್ಯಾಗ ಮತ್ತು ಧೈರ್ಯ ಹಾಗೂ ದಯೆ ಮೂರ್ತಿಯಾದ ಶ್ರೀರಾಮನ ಆದರ್ಶಗಳು ಜೀವನಕ್ಕೆ ಪ್ರೇರಣೆಯಾಗಲಿ ಎಂದು ರಾಮನವಮಿಯ ಶುಭಾಶಯ ಕೋರಿದ್ದಾರೆ.

ರಾಮನ ಆದರ್ಶ, ತ್ಯಾಗ ಎಲ್ಲರಿಗೂ ಆದರ್ಶಪ್ರಾಯವಾಗಲಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ ಸಾಮಾಜಿಕ ಜಾಲತಾಣದಲ್ಲಿ ಶುಭಾಶಯ ಕೋರಿದ್ದಾರೆ.

****************

ಮಹಾವಿಷ್ಣುವಿನ ಏಳನೇಯ ಅವತಾರವಾದ ಶ್ರೀರಾಮನು ಜನಿಸಿದ ನವಮಿಯಂದು ರಾಮನವಮಿ ಆಚರಿಸಲಾಗುತ್ತದೆ. ಬೆಂಗಳೂರಿನಲ್ಲಿ ಶ್ರದ್ಧಾ-ಭಕ್ತಿಯಿಂದ ರಾಮನವಮಿಯನ್ನು ಆಚರಿಸಲಾಗುತ್ತಿದೆ. ಶ್ರೀರಾಮನ ದೇವಾಲಯಗಳಲ್ಲಿ ವಿಶೇಷ ಪೂಜಾ ಕೈಂಕರ್ಯ, ಹೋಮ ಕೈಗೊಳ್ಳಲಾಗಿದೆ. ಭಕ್ತರು ಸರತಿ ಸಾಲಿನಲ್ಲಿ ನಿಂತು ಶ್ರೀರಾಮನ ದರ್ಶನ ಪಡೆದರು. ಭಕ್ತರಿಗಾಗಿ ಮಜ್ಜಿಗೆ, ಪಾನಕ, ಕೊಸಂಬರಿಯನ್ನು ವಿತರಣೆ ಮಾಡಲಾಯಿತು.

ರಾಮನವಮಿಯ ಅಂಗವಾಗಿ ಚಿತ್ರದುರ್ಗದ ಕೋಟೆ ಆಂಜನೇಯ, ತಮಟಗಲ್ಲು ಆಂಜನೇಯ ಸ್ವಾಮಿದೇವಾಲಯದಲ್ಲಿ ವಿಶೇಷ ಪೂಜೆ ಆಯೋಜಿಸಲಾಗಿತ್ತು.

ಕೋಲಾರ ಜಿಲ್ಲೆಯಾದ್ಯಂತ ಶ್ರೀರಾಮನವಮಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ ನೆಲಮಂಗಲ ತಾಲೂಕುಗಳಲ್ಲಿ ಶ್ರೀ ರಾಮನವಮಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ.

ಶ್ರೀರಾಮನವಮಿಯನ್ನು ದಾವಣಗೆರೆ ಜಿಲ್ಲೆಯಾದ್ಯಂತ ಇಂದು ಸಂಭ್ರಮದಿಂದ ಆಚರಿಸಲಾಯಿತು. ಭಕ್ತರಿಗೆ ಪಾನಕ, ಕೋಸಂಬರಿಯನ್ನು ಇದೇ ವೇಳೆ ವಿತರಿಸಲಾಯಿತು.

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಇಂದು ಶ್ರೀರಾಮ ಜಯಂತಿಯನ್ನು ಭಕ್ತಿ ಭಾವದಿಂದ ಆಚರಿಸಲಾಗುತ್ತಿದೆ. ಚಿಕ್ಕಮಗಳೂರು ಹೊರ ವಲಯದ ಹಿರೇಮಗಳೂರಿನ ಪ್ರಸಿದ್ಧ ಕೋದಂಡರಾಮಚಂದ್ರ ಸ್ವಾಮಿ ದೇವಾಲಯದಲ್ಲಿ ರಾಮ ಜಯಂತಿ ಅಂಗವಾಗಿ ಮುಂಜಾನೆಯಿಂದಲೆ ವಿಶೇಷ ಪೂಜೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾಭಕ್ತಿಗಳಿಂದ ಶ್ರೀರಾಮನವಮಿ ಆಚರಿಸಲಾಗುತ್ತಿದ್ದು, ಚಿಕ್ಕಬಳ್ಳಾಪುರ ನಗರದ ಶ್ರೀ ಕೋದಂಡರಾಮಸ್ವಾಮಿ ದೇವಾಲಯ, ಸೇರಿದಂತೆ ಹಲವು ದೇವಾಲಯಗಳಲ್ಲಿ ಶ್ರೀರಾಮ ಭಜನೆ ಹಾಗೂ ರಾಮನಾಮ ಜಪಗಳು ನಡೆದವು.

***************

ಕೊಡಗು ಜಿಲ್ಲೆಯ ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣದಲ್ಲಿ ಬಿಜೆಪಿ ಕೊಡಗಿನ ಇಬ್ಬರು ಶಾಸಕರ ಹೆಸರನ್ನು ತಳಕು ಹಾಕುತ್ತಿರುವುದನ್ನು ವಿರೋಧಿಸಿ ಮಡಿಕೇರಿಯಲ್ಲಿಂದು ಕಾಂಗ್ರೆಸ್ ಪ್ರತಿಭಟನೆ ನಡೆಸಿತು.

ಶಾಸಕರಾದ ಎ.ಎಸ್. ಪೊನ್ನಣ್ಣ ಮತ್ತು ಡಾ. ಮಂಥರ್ ಗೌಡ ಹೆಸರನ್ನು ವಿನಯೋ ಸೋಮಯ್ಯ ಸಾವಿನ ಪ್ರಕರಣದಲ್ಲಿ ಬಳಸಿಕೊಳ್ಳುವ ಮೂಲಕ ಬಿಜೆಪಿ ರಾಜಕೀಯ ಮಾಡುತ್ತಿದೆ ಎಂದು ಕಾಂಗ್ರೆಸ್ ಕಾರ್ಯಕರ್ತರು ದೂರಿದ್ದಾರೆ. ಮಡಿಕೇರಿಯ ಗಾಂಧಿ ಮೈದಾನದಿಂದ ಜನರಲ್ ತಿಮ್ಮಯ್ಯ ವೃತ್ತದವರೆಗೆ ಮೆರವಣಿಗೆ ನಡೆಸಿದರು. ಗಾಂಧಿ ಮೈದಾನದಲ್ಲಿ ಸಭೆ ನಡೆಸಿದ ಕಾಂಗ್ರೆಸ್ ಮುಖಂಡರು, ಸಾವಿನ ಪ್ರಕರಣದಲ್ಲಿಯೂ ಬಿಜೆಪಿ ರಾಜಕೀಯ ದ್ವೇಷ ಮೆರೆಯುತ್ತಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.

***************

ಆಕಾಶವಾಣಿಯ ನಿವೃತ್ತ ಸುದ್ದಿ ಸಂಪಾದಕಿ, ಹಿರಿಯ ಪತ್ರಕರ್ತೆ ನಾಗಮಣಿ ಎಸ್ ರಾವ್ ರಚಿತ ಸುದ್ದಿ ಸಂಗಾತಿಯ ಸ್ವಗತ ಆತ್ಮಕಥನ ಲೋಕಾರ್ಪಣೆ ಕಾರ್ಯಕ್ರಮ ಬೆಂಗಳೂರಿನಲ್ಲಿಂದು ನಡೆಯಿತು.

ನಾಗಮಣಿ ಅವರ ಸಹಪಾಠಿಯಾಗಿದ್ದ ನಾಡೋಜ ಡಾ.ಹಂ.ಪ. ನಾಗರಾಜಯ್ಯ ಕೃತಿಯನ್ನು ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಶಾ

ಖಾನಂ, ಹಿರಿಯ ಪತ್ರಕರ್ತೆ ಕೆ ಎಚ್ ಸಾವಿತ್ರಿ, ಪದ್ಮಾ ಶಿವಮೊಗ್ಗ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

****************

ದಕ್ಷಿಣ ಒಳನಾಡು ಸೇರಿದಂತೆ ರಾಜ್ಯದ ವಿವಿಧೆಡೆ ಮಳೆಯಾಗಿದೆ. ಕರಾವಳಿ ಕರ್ನಾಟಕದ ಒಂದೆರೆಡು ಕಡೆ ಇಂದು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಒಣಹವೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ವಿಜಯಪುರ, ಕಲಬುರಗಿ, ರಾಯಚೂರು, ಯಾದಗಿರಿ, ಕೊಪ್ಪಳ ಜಿಲ್ಲೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ.

********ಮುಕ್ತಾಯ********